# ನೇಮಕಾತಿ ಅಧಿಸೂಚನೆ

## ನೇಮಕಾತಿ ಪ್ರಕಟಣೆ

## ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶವರ ಕಛೇರಿ, ಚಾಮರಾಜನಗರ

**ಅಧಿಸೂಚನೆ ಸಂಖ್ಯೆ ಎಡಿಎಮ್ಎನ್ / 01 /2026**

**ದಿನಾಂಕಃ 07.03.2026**

ವಿಷಯಃ ಚಾಮರಾಜನಗರ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರು ಗ್ರೇಡ್ - **III** ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ

--------------

ಮೇಲ್ಕಂಡ ಅಧಿಸೂಚನೆಯನ್ವಯ ಚಾಮರಾಜನಗರದ ಜಿಲ್ಲಾ ನ್ಯಾಯಾಂಗ ಘಟಕದ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ 02 ಶೀಘ್ರಲಿಪಿಗಾರರು ಗ್ರೇಡ್ – **III** ಹುದ್ದೆಗಳಿಗೆ (ಹಿಂಬಾಕಿ ಹುದ್ದೆಗಳು) ಅರ್ಹ ಅಭ್ಯರ್ಥಿಗಳಿಂದ ಆನ್ ಲೈನ್ **(Online)** ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆನ್ ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಕೊನೆಯ ದಿನಾಂಕಃ **13.04.2026**

ವಿಶೇಷ ಸೂಚನೆ :

1. ಅರ್ಜಿಗಳನ್ನು ಕಡ್ಡಾಯವಾಗಿ ಚಾಮರಾಜನಗರ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್

   **https://chamarajanagara.dcourts.gov.in/online-recruitment/**

   ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್ ಲೈನ್ ನಲ್ಲಿ ದಿನಾಂಕಃ **13.03.2026** ರಿಂದ ದಿನಾಂಕಃ **13.04.2026** ರ ರಾತ್ರಿ **11.59** ರವರೆಗೆ ಮಾತ್ರ ಸಲ್ಲಿಸತಕ್ಕದ್ದು. ಮುಂದುವರಿದು ಪೂರ್ಣ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಶುಲ್ಕ ಪಾವತಿಸಲು ಕಡೆಯ ದಿನಾಂಕಃ **16.04.2026** ಆಗಿರುತ್ತದೆ.

2. ಅಭ್ಯರ್ಥಿಗಳು ಅರ್ಜಿಯಲ್ಲಿ ತಮ್ಮ ಚಾಲ್ತಿಯಲ್ಲಿರುವ ದೂರವಾಣಿ ಸಂಖ್ಯೆ ಹಾಗೂ ಇ – ಮೇಲ್ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು.

3. ಆನ್ ಲೈನ್ ಹೊರತುಪಡಿಸಿ/ ಖುದ್ದಾಗಿ / ಅಂಚೆ ಮೂಲಕ / ಇನ್ನಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

## ಹುದ್ದೆಗಳ ಸಂಖ್ಯೆ: 02 ಹಿಂಬಾಕಿ ಹುದ್ದೆಗಳು

ವೇತನ ಶ್ರೇಣಿ: **44425-1125-47800-1250-52800-1375-58300-1500-64300-1650-74200-1900-83700/-**

**ಹುದ್ದೆಗಳ ವರ್ಗೀಕರಣ :**

| | |
|---|---|
| 1. ಪರಿಶಿಷ್ಟ ಜಾತಿ (ಅಂಗವಿಕಲ)* | 1 ಹುದ್ದೆ (ಹಿಂಬಾಕಿ) |
| 2. ಪ್ರವರ್ಗ – **II** (ಎ) (ಅಂಗವಿಕಲ)* | 1 ಹುದ್ದೆ (ಹಿಂಬಾಕಿ) |
| **ಒಟ್ಟು** | **2 ಹಿಂಬಾಕಿ ಹುದ್ದೆ ಗಳು** |

*__ಅಂಗವಿಕಲ ಮೀಸಲಾತಿ:__ ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 149 ಎಸ್ ಆರ್ ಆರ್ 2020, ಬೆಂಗಳೂರು, ದಿನಾಂಕ: 25.09.2020 ರನ್ವಯ "ಒಂದು ವೇಳೆ ಅಧಿಸೂಚಿಸಿರುವ ಅಂಗವಿಕಲತೆ ಹೊಂದಿರುವ ಅಭ್ಯರ್ಥಿ ಲಭ್ಯವಿಲ್ಲದೇ ಇದ್ದಲ್ಲಿ, ಅಂತಹ ರಿಕ್ತ ಸ್ಥಾನವನ್ನು ಮುಂದಿನ ನೇಮಕಾತಿಗೆ ಮುಂದುಕ್ಕೊಯ್ಯತಕ್ಕದ್ದು (Carry forward) ಮುಂದಿನ ನೇಮಕಾತಿಯಲ್ಲಿ ಅಂತಹ ಅಭ್ಯರ್ಥಿಗಳು ಆಯ್ಕೆಯಾದ್ದಲ್ಲಿ ಮೊದಲಿಗೆ ಈ ಹಿಂದಿನ ನೇಮಕಾತಿ ಪ್ರಕ್ರಿಯೆಯಲ್ಲಿ ಅಧಿಸೂಚಿಸಿರುವ ಅಭ್ಯರ್ಥಿಗಳು ಲಭ್ಯವಿಲ್ಲದ ಕಾರಣ ಮುಂದಕ್ಕೆ ತರಲಾದ (Carry forward) ಹುದ್ದೆಗಳಿಗೆ ಎದುರಾಗಿ ಮೊದಲು ಅಂತಹ ಅಂಗವಿಕಲ ಅಭ್ಯರ್ಥಿಗಳನ್ನು ಭರ್ತಿ ಮಾಡತಕ್ಕದ್ದು. ಒಂದು ವೇಳೆ ಎರಡನೇ ನೇಮಕಾತಿಯ ಸಂದರ್ಭದಲ್ಲಿಯೂ ಅರ್ಹ ಅಭ್ಯರ್ಥಿ ಲಭ್ಯವಾಗದೇ ಹೋದಲ್ಲಿ, ಆಯಾ ಪ್ರವರ್ಗದ ಇತರೆ ಅರ್ಹ ಅಭ್ಯರ್ಥಿಯಿಂದ ಭರ್ತಿ ಮಾಡಿಕೊಳ್ಳತಕ್ಕದ್ದು ಎಂದು ತಿಳಿಸಿರುತ್ತಾರೆ.

**ಶೈಕ್ಷಣಿಕ ವಿದ್ಯಾರ್ಹತೆ:**

1. ದ್ವಿತೀಯ ಪಿ.ಯು.ಸಿ. ಅಥವಾ ಅದಕ್ಕೆ ತತ್ಸಮಾನದ ಯಾವುದೇ ಮೂರು ವರ್ಷದ ಡಿಪ್ಲೋಮೋ ಕೋರ್ಸ್ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗತಕ್ಕದ್ದು

   ಮತ್ತು

   ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸಿರುವ ಹಿರಿಯ ದರ್ಜೆ **(Senior Grade)** ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಹಾಗೂ ಶೀಘ್ರಲಿಪಿ ವಿಷಯದಲ್ಲಿ ತೇರ್ಗಡೆ ಹೊಂದಿರಬೇಕು.

   ಅಥವಾ

2. ಡಿಪ್ಲೋಮೋ ಇನ್ ಕಮರ್ಷಿಯಲ್ ಪ್ರಾಕ್ಟೀಸ್ / ಸೆಕ್ರೆಟರಿಯಲ್ ಪ್ರಾಕ್ಟೀಸ್ ಉತ್ತೀರ್ಣರಾಗಿರತಕ್ಕದ್ದು ಮತ್ತು ಅದರಲ್ಲಿ ಕನ್ನಡ / ಆಂಗ್ಲ ಭಾಷೆಯಲ್ಲಿ ಯಾವುದಾದರೂ ಒಂದು ಭಾಷೆಯಲ್ಲಿ ಶೀಘ್ರಲಿಪಿ ಮತ್ತು ಬೆರಳಚ್ಚು ವಿಷಯದಲ್ಲಿ ಉತ್ತೀರ್ಣರಾಗಿದ್ದರೆ ಅಂತಹ ಅಭ್ಯರ್ಥಿಗಳು ಉಳಿದ ಕನ್ನಡ / ಆಂಗ್ಲ ಭಾಷೆಯ ಶೀಘ್ರಲಿಪಿ ಮತ್ತು ಬೆರಳಚ್ಚು ಪರೀಕ್ಷೆಯನ್ನು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸುವ ಹಿರಿಯ ದರ್ಜೆ **(Senior Grade)** ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿರಬೇಕು.

| ನೇಮಕಾತಿ ವಿಧಾನ | | |
|---|---|---|
| 1. | ಶೀಘ್ರಲಿಪಿಗಾರ | ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳು ಮತ್ತು ಒಂದು ನಿಮಿಷಕ್ಕೆ **120** ಪದಗಳ ದರದಲ್ಲಿ **5** ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು **45** ನಿಮಿಷಗಳಲ್ಲಿ ಕಂಪ್ಯೂಟರ್ ನಲ್ಲಿ ಅನುಲಿಪಿ ಮಾಡುವ "ಸಾಮರ್ಥ್ಯ ಪರೀಕ್ಷೆ" ಯಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ **1:5** ಅನುಪಾತದಲ್ಲಿ ಸಂದರ್ಶನ ನಡೆಸಲಾಗುವುದು. ("ಸಾಮರ್ಥ್ಯ ಪರೀಕ್ಷೆ" ಯಲ್ಲಿ ಗರಿಷ್ಟ ಅಂಕಗಳು **100** ಮತ್ತು ಪರೀಕ್ಷೆ ಪಾಸಾಗಲು ಶೇಕಡಾ **50** ಗಳಿಸಿರಬೇಕು.) |

## **ಸೂಚನೆ**

1. ಮೇಲೆ ತಿಳಿಸಿರುವ ಹುದ್ದೆಗೆ **05** ಅಂಕಗಳನ್ನು ಸಂದರ್ಶನಕ್ಕೆ ನಿಗದಿಸಲಾಗಿದೆ.
2. ಆಯ್ಕೆಯ ಪಟ್ಟಿಯನ್ನು ಕರ್ನಾಟಕ ರಾಜ್ಯ ಪತ್ರ ಅಧಿಸೂಚನೆ ಸಂಖ್ಯೆ **LAW** 01 **LAC** 2005, **Bengaluru, Dated** 13.02.2008 **Rule** 4(**g**) ಪ್ರಕಾರ ಪ್ರಕಟಿಸಲಾಗುವುದು.

## **ಪರಿವೀಕ್ಷಣಾ ಅವಧಿ** :

ಆಯ್ಕೆಯಾದ ಅಭ್ಯರ್ಥಿಗಳನ್ನು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣಾ ನಿಯಮಗಳು) **1977** ರ ಪ್ರಕಾರ **2**ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ಅವರುಗಳ ಹುದ್ದೆಗೆ ನಿಗದಿಪಡಿಸಿರುವ ಇಲಾಖಾ ಪರೀಕ್ಷೆಗಳಲ್ಲಿ, ಕನ್ನಡ ಭಾಷಾ ಪರೀಕ್ಷೆಯಲ್ಲಿ ಮತ್ತು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.

## **ವಯೋಮಿತಿ ಸಡಿಲಿಕೆ** :

1. ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಅಭ್ಯರ್ಥಿಯು
   a) ಕನಿಷ್ಟ **18** ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು ಮತ್ತು ಗರಿಷ್ಟ ವಯಸ್ಸನ್ನು ಮೀರಿರ ಕೂಡದು.

| | |
|---|---|
| ಸಾಮಾನ್ಯ ವರ್ಗ | **35 +5*** ವರ್ಷ ಮೀರಿರಬಾರದು |
| ಪ್ರವರ್ಗ **2**ಎ, **2**ಬಿ, **3**ಎ, **3**ಬಿ | **38 +5 ***ವರ್ಷ ಮೀರಿರಬಾರದು |
| ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ – **1** | **40 +5*** ವರ್ಷ ಮೀರಿರಬಾರದು |

* ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ **262** ಸೇನೆನಿ **2025**, ದಿನಾಂಕ: **29.01.2026** ರನ್ವಯ "ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಈ ಆದೇಶ ಹೊರಡಿಸಿದ ದಿನಾಂಕದ ನಂತರ ಮುಂದಿನ ದಿನಾಂಕ **31.12.2027** ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸಿರುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪ್ರವರ್ಗಗಳ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿ ಕ್ರಮವಾಗಿ **(as a one time measure) 5** ವರ್ಷಗಳ ಸಡಿಲಿಕೆ ನೀಡಿ ಆದೇಶಿಸಲಾಗಿದೆ" ಎಂದು ತಿಳಿಸಿರುತ್ತಾರೆ.

2. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆಗೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಟ ವಯೋಮಿತಿಯನ್ನು ಅವರು ಎಷ್ಟು ವರ್ಷಗಳು ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.
3. ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು
4. ಅಭ್ಯರ್ಥಿಯು ಅಂಗವಿಕಲನಾಗಿದ್ದಲ್ಲಿ ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕನಾಗಿದ್ದಲ್ಲಿ 10 ವರ್ಷಗಳು
5. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಟ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು
6. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್ ನಲ್ಲಿ ಪೂರ್ಣಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು ಅಭ್ಯರ್ಥಿಯು ರಾಜ್ಯ ಸರ್ಕಾರದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು

## ಅರ್ಜಿ ಸಲ್ಲಿಸುವ ವಿಧಾನಃ

ನಿಗದಿತ ಅರ್ಜಿ ಶುಲ್ಕ ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನಃ

| | |
|---|---|
| ಸಾಮಾನ್ಯ ವರ್ಗ, ಪ್ರವರ್ಗ – 2ಎ, 2ಬಿ, 3ಎ, ಮತ್ತು 3ಬಿ ಸೇರಿದ ಅಭ್ಯಥಿಗಳಿಗೆ | ರೂ. 200/- |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ – 1 ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ | ಶುಲ್ಕ ವಿನಾಯಿತಿ ಇರುತ್ತದೆ |

ನಿಗದಿತ ಶುಲ್ಕವನ್ನು ಮೇಲೆ ನೀಡಲಾದ ನ್ಯಾಯಾಲಯದ ವೆಬ್‌ಸೈಟ್ ಲಿಂಕ್ ಮುಖಾಂತರ **Online Payment through Net – Banking / Credit – Card / Debit – Card/ UPI** ಸೌಲಭ್ಯದ ಮೂಲಕ ಮಾತ್ರ ಪಾವತಿಸತಕ್ಕದ್ದು, ಇದನ್ನು ಹೊರತುಪಡಿಸಿ ಯಾವುದೇ ಚಲನ್ಃ ಡಿಮ್ಯಾಂಡ್ ಡ್ರಾಫ್ಟ್ಃ ಪೋಸ್ಟಲ್ ಆರ್ಡರ್ಃ ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## ಅಭ್ಯರ್ಥಿಗಳು ON–LINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.

1. ಅಭ್ಯರ್ಥಿಗಳು ಅರ್ಜಿಯನ್ನು **ON–LINE** ಮೂಲಕ ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
2. ಅಭ್ಯರ್ಥಿಗಳು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ–ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ **SMS**ಅಥವಾ ಇ–ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.
3. ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್ ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು ಅಳತೆಯಲ್ಲಿ **5cm**ಉದ್ದ x **3.6 cm** ಅಗಲವುಳ್ಳದ್ದಾಗಿರಬೇಕು ಮತ್ತು **50 kb** ಅಳತೆಯದ್ದಾಗಿರಬೇಕು ಹಾಗೂ ಅದು **.jpg** ನಮೂನೆಯಲ್ಲಿರಬೇಕು ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು)

ಇ) ಅಭ್ಯರ್ಥಿಯು ಕಪ್ಪು ಬಾಲ್ ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (**2.5 cm** ಉದ್ದ × **7.5 cm** ಅಗಲವುಳ್ಳದ್ದಾಗಿರಬೇಕು ಮತ್ತು **26 kb** ಅಳತೆಯದ್ದಾಗಿರಬೇಕು ಹಾಗೂ **.jpg** ನಮೂನೆಯಲ್ಲಿರಬೇಕು) ಅಪ್ ಲೋಡ್ ಮಾಡಬೇಕು.

**4.** ದ್ವಿತೀಯ ಪಿ.ಯು.ಸಿ. ಅಥವಾ ಅದಕ್ಕೆ ತತ್ಸಮಾನದ ಯಾವುದೇ ಮೂರು ವರ್ಷದ ಡಿಪ್ಲೋಮೋ ಕೋರ್ಸ್ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಒಟ್ಟು ಅಂಕಗಳನ್ನು ನಮೂದಿಸತಕ್ಕದ್ದು ಜೊತೆಗೆ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ವತಿಯಿಂದ ನಡೆಸಿರುವ ಹಿರಿಯ ದರ್ಜೆ (**Senior Grade**) ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಹಾಗೂ ಶೀಘ್ರಲಿಪಿ ವಿಷಯದಲ್ಲಿ ಪಡೆದಿರುವ ಅಂಕಗಳನ್ನು ನಮೂದಿಸತಕ್ಕದ್ದು.

**5.** ಡಿಪ್ಲೋಮೋ ಇನ್ ಕಮರ್ಷಿಯಲ್ ಪ್ರಾಕ್ಟೀಸ್ / ಸೆಕ್ರೆಟರಿಯಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಒಟ್ಟು ಅಂಕಗಳ ಜೊತೆಗೆ ತಾವು ವಿದ್ಯಾಭ್ಯಾಸ ಮಾಡಿರುವ ತಾಂತ್ರಿಕ ಮಂಡಳಿಯವರು ನಿಗದಿ ಪಡಿಸಿರುವ ಆಂಗ್ಲ / ಕನ್ನಡ ಭಾಷೆಯ ಹಿರಿಯ ದರ್ಜೆ ಶೀಘ್ರಲಿಪಿ ಹಾಗೂ ಬೆರಳಚ್ಚಿನ ತತ್ಸಮಾನ ಅಂಕಗಳನ್ನು ಭರ್ತಿ ಮಾಡುವ ಸಮಯದಲ್ಲಿ ಸದರಿ ವಿಷಯಗಳಲ್ಲಿ ಪಡೆದ ಮೊತ್ತ ಅಂಕಗಳನ್ನು ಮಾತ್ರ (**Total Marks**) ಅಂದರೆ **Internal Marks** ಸೇರಿಸಿ ಒಟ್ಟು ಮೊತ್ತ ಮತ್ತು ಒಟ್ಟು ಅಂಕಕ್ಕೆ ಶೇಕಡ ಎಷ್ಟು ಅಂಕ ಬರುತ್ತದೋ ಅದನ್ನು ನಮೂದಿಸತಕ್ಕದ್ದು.

**6.** ತದನಂತರ ಅಭ್ಯರ್ಥಿಯು **ON–LINE** ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನೂ ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಶುಲ್ಕವನ್ನು ತುಂಬಿದ ಪ್ರತಿಯನ್ನು **Download** ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ ಸಮಯದಲ್ಲಿ ಹಾಜರುಪಡಿಸತಕ್ಕದು.

**7.** ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ.

**8.** ನ್ಯಾಯಾಲಯದ ಅಧಿಕೃತ ವೆಬ್ ಸೈಟ್ ನಲ್ಲಿ ಅರ್ಜಿಯನ್ನು ಆನ್ ಲೈನ್ ಮೂಲಕ ನೊಂದಾಯಿಸಲು / ಸಲ್ಲಿಸಲು ದಿನಾಂಕಃ **13.04.2026** ರಾತ್ರಿ **11.59** ರವರೆಗೆ ಮತ್ತು ಅರ್ಜಿ ಶುಲ್ಕ ಪಾವತಿಸಲು ಕಡೆಯ ದಿನಾಂಕಃ **16.04.2026** ರಾತ್ರಿ **11.59** ರವರೆಗೆ ಅವಕಾಶವಿರುತ್ತದೆ.

9. ಅರ್ಹ ಅಭ್ಯರ್ಥಿಗಳಿಗೆ **SMS & E-Mail** ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು.

10. ಆನ್ ಲೈನ್ ಹೊರತುಪಡಿಸಿ ಯಾವುದೇ ವಿಧಾನದಲ್ಲಿ ಕಳುಹಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

11. ಸೇವಾನಿರತ ಅಭ್ಯರ್ಥಿಗಳು ಅರ್ಜಿಗಳ ಸ್ವೀಕೃತಿಗಾಗಿ ನಿಗದಿಪಡಿಸಲಾದ ದಿನಾಂಕ ಹಾಗೂ ಸಮಯವನ್ನು ಮೀರದಂತೆ ಆನ್ ಲೈನ್ ನಲ್ಲಿ ತಮ್ಮ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಮತ್ತು ಸಂಬಂಧಪಟ್ಟ ಪ್ರಾಧಿಕಾರದಿಂದ ನೀಡಲಾದ "ನಿರಾಕ್ಷೇಪಣಾ ಪ್ರಮಾಣಪತ್ರ " ವನ್ನು ಹೊಂದಿರತಕ್ಕದು.

12. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ ಪ್ರವರ್ಗ–1 ರ ಅಭ್ಯರ್ಥಿಗಳು ನಮೂನೆ 'ಇ'ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ 'ಎಫ್' ನಲ್ಲಿ ಸಂಬಂಧಿಸಿದ ತಹಸೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳನ್ನು ಹೊಂದಿರತಕ್ಕದ್ದು.

13. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕಃ 19.11.2005 ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ/115/ಸನೆನಿ/2005 ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದಿರಬೇಕು.

14. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ / ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಲ್ಲಿಸುವುದು.

15. ವಿಧವೆಯರು ಜೀತ ಕಾರ್ಮಿಕರು ಮತ್ತು ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಹೊಂದಿರತಕ್ಕದ್ದು.

16. ಮೇಲ್ಕಂಡ ಪ್ರಯೋಜನಗಳನ್ನು ಕ್ಲೇಮು ಮಾಡುವ ಅಭ್ಯರ್ಥಿಗಳು ಆನ್ ಲೈನ್ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದಂದು ಅಥವಾ ಅದಕ್ಕಿಂತ ಮುಂಚೆ ಸಕ್ಷಮ ಪ್ರಾಧಿಕಾರಿಗಳು ನೀಡಿದ ಸಂಬಂಧಪಟ್ಟ ಪ್ರಮಾಣಪತ್ರಗಳನ್ನು ಹೊಂದಿರತಕ್ಕದು.

17. ದಾಖಲೆಗಳ ಪರಿಶೀಲನೆಗಾಗಿ ಕರೆಯಲ್ಪಡುವ ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆ (ಜನ್ಮ ದಿನಾಂಕವನ್ನು ತೋರಿಸಲು ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ, ದ್ವಿತೀಯ ಪಿ.ಯು.ಸಿ. ಅಂಕಪಟ್ಟಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ, ಶೀಘ್ರಲಿಪಿ ಪರೀಕ್ಷೆಗಳ ಪ್ರಮಾಣ ಪತ್ರಗಳನ್ನು, ಬೆರಳಚ್ಚು ಪರೀಕ್ಷೆಗಳ ಪ್ರಮಾಣ ಪತ್ರಗಳನ್ನು, ಜಾತಿ ಪ್ರಮಾಣ ಪತ್ರ, ಗ್ರಾಮೀಣ/ ಮಾಜಿ ಸೈನಿಕರು / ವಿಧವೆಯರು / ಅಂಗವಿಕಲರು

ಸಂಬಂಧಿಸಿದಂತೆ ಅಗತ್ಯ ಮೂಲ ದಾಖಲೆಗಳನ್ನು ಪರಿಶೀಲನೆಗಾಗಿ ಸಲ್ಲಿಸತಕ್ಕದ್ದು. ಪರಿಶೀಲನೆ ಮಾಡುವಾಗ ಅರ್ಜಿದಾರರು ಅರ್ಜಿಯಲ್ಲಿ ಒದಗಿಸಿರುವ ಮಾಹಿತಿಯು ಸುಳ್ಳೆಂದು ಕಂಡುಬಂದಲ್ಲಿ ಆಗ ಅವರ ಅಭ್ಯರ್ಥಿಕೆಯು ತಿರಸ್ಕೃತವಾಗುತ್ತದೆ ಹಾಗೂ ಅವರು ಸುಳ್ಳು ಮಾಹಿತಿ ನೀಡಿದ್ದಕ್ಕಾಗಿ ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೂ ಸಹ ಗುರಿಯಾಗಬೇಕಾಗುತ್ತದೆ.

18. ಅಭ್ಯರ್ಥಿಗಳು ತಮ್ಮ ಎಸ್.ಎಸ್.ಎಲ್.ಸಿ ಅಂಕಗಳು / ದ್ವಿತೀಯ ಪಿ.ಯು.ಸಿ. ಅಂಕಗಳು ಶ್ರೇಣಿಯಲ್ಲಿದ್ದರೆ ಅಥವಾ **CGPA** ಆಗಿದ್ದರೆ ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು, ಪಡೆದ ಅಂಕಗಳು ಮತ್ತು ಒಟ್ಟು ಶೇಕಡಾವಾರನ್ನು ಕಡ್ಡಾಯವಾಗಿ ನಿಗಧಿತ ಕಾಲಂನಲ್ಲಿ ನಮೂದಿಸಬೇಕು.

19. ನೈತಿಕ ದುರ್ನಡತೆಗಾಗಿ / ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ / ಕೇಂದ್ರ / ಸ್ಥಳೀಯ ಸಂಸ್ಥೆ ಕಛೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನೀತಿಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಅಥವಾ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ /ನೀತಿ ಬಾಹಿರ ಚುಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ / ವಜಾ ಮಾಡಲ್ಪಟ್ಟಿದ್ದು ಕಂಡುಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.

20. ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ ಮಾಡಲಾಗುತ್ತದೆ ಹಾಗೂ ಕಾನೂನು ಕ್ರಮ ಜರುಗಿಸಲಾಗುವುದು.

21. ಅಭ್ಯರ್ಥಿಗಳ ಆಯ್ಕೆಯ ವಿಷಯದಲ್ಲಿ ಆಯ್ಕೆ ಪ್ರಾಧಿಕಾರದ ನಿರ್ಧಾರವೇ ಅಂತಿಮವಾಗಿರುತ್ತದೆ.

22. ಪಿಂಚಣಿ ಸೌಲಭ್ಯ: ಸರ್ಕಾರದ ಆದೇಶ ಸಂಖ್ಯೆ: ಎಫ್‌ಡಿ (ಎಸ್ ಪಿಎಲ್) 04 ಪಿಇಟಿ 2005, ದಿನಾಂಕ: 31.03.2006 ರಂತೆ

23. ಅಭ್ಯರ್ಥಿಯು ನೇಮಕಾತಿ ಸಂಬಂಧ ಯಾವುದೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅಂತಹವರನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

24. ಅರ್ಹತಾ ಪರೀಕ್ಷೆಗೆ ಹಾಗೂ ಸಂದರ್ಶನಕ್ಕೆ ಆಯ್ಕೆಯಾಗುವ ಅಭ್ಯರ್ಥಿಗಳು ಚಾಮರಾಜನಗರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

25. ಅನುಲಿಪಿ ಅರ್ಹತಾ ಪರೀಕ್ಷೆಯನ್ನು ಮಾನ್ಯ ಉಚ್ಚ ನ್ಯಾಯಾಲಯದ ತಂತ್ರಾಂಶದ ಮೂಲಕ ಕಂಪ್ಯೂಟರಿನಲ್ಲಿ ನಡೆಸಲಾಗುವುದು ಮತ್ತು ಕನ್ನಡ ಅನುಲಿಪಿ ಅರ್ಹತಾ ಪರೀಕ್ಷೆಯನ್ನು ಜಿಲ್ಲಾ ನ್ಯಾಯಾಲಯದ ವೆಬ್ ಸೈಟ್ ನಲ್ಲಿ ನೀಡಲಾಗಿರುವ ಕನ್ನಡ ಕೀ ಬೋರ್ಡ್ ಲೇ ಔಟ್ ಪ್ರಕಾರ ನಡೆಸಲಾಗುವುದು.

25. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲುವ ಸಮಯದಲ್ಲಿ ಯಾವುದಾದರೂ ತಾಂತ್ರಿಕ ದೋಷವಾದ್ದಲ್ಲಿ **onlinerecruitmentpdjchmnagar@gmail.com** ಈ ಇ–ಮೇಲ್ ಗೆ ತಮ್ಮ ದೂರುಗಳನ್ನು ಸಲ್ಲಿಸಿ ಬಗೆಹರಿಸಿಕೊಳ್ಳುವುದು.

(ಪ್ರಭಾವತಿ ಜಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು
ಚಾಮರಾಜನಗರ

ಪ್ರತಿಯನ್ನು ಮಾನ್ಯ ಮಹಾ ವಿಲೇಖಾನಾಧಿಕಾರಿಗಳು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ (ಪತ್ರದೊಂದಿಗೆ) ಸಲ್ಲಿಸಲಾಗಿದೆ.

**ಪ್ರತಿಯನ್ನುಃ**

1. ರಾಜ್ಯದ ಎಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯಗಳ (ಆಡಳಿತ) ಇವರಿಗೆ ತಮ್ಮ ಸೂಚನಾ ಫಲಕದಲ್ಲಿ ಪ್ರಕಟಿಸಲು ವಿನಂತಿ. ಪ್ರಧಾನ ನಗರ ಸಿವಿಲ್ ಮತ್ತು ಸತ್ರ ನ್ಯಾಯಾಧೀಶರು, ನಗರ ಸಿವಿಲ್ ಮತ್ತು ಸತ್ರ ನ್ಯಾಯಾಲಯ, ಬೆಂಗಳೂರು ನಗರ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಬೆಂಗಳೂರು ಗ್ರಾಮಾಂತರ, ಬಾಗಲಕೋಟೆ, ಬೆಳಗಾಂ, ಬಳ್ಳಾರಿ, ಬೀದರ್, ಬಿಜಾಪುರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಚಿತ್ರದುರ್ಗ, ದಕ್ಷಿಣ ಕನ್ನಡ (ಮಂಗಳೂರು), ದಾವಣಗೆರೆ, ಧಾರವಾಡ , ಗದಗ, ಗುಲ್ಬರ್ಗಾ, ಹಾವೇರಿ, ಕೊಪ್ಪಳ, ಕೊಡಗು (ಮಡಿಕೇರಿ), ಮಂಡ್ಯ, ಮೈಸೂರು, ರಾಯಚೂರು, ರಾಮನಗರ, ಶಿವಮೊಗ್ಗ, ತುಮಕೂರು, ಉಡುಪಿ ಉತ್ತರ ಕನ್ನಡ (ಕಾರವಾರ), ಯಾದಗಿರಿ, ಕೋಲಾರ, ಹಾಸನ.
2. ವಾರ್ತಾಧಿಕಾರಿಗಳು, ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಚಾಮರಾಜನಗರ ಇವರಿಗೆ ವ್ಯಾಪಕ ಪ್ರಚಾರಕ್ಕಾಗಿ.
3. ಈ ಜಿಲ್ಲೆಯ ಎಲ್ಲಾ ಪೀಠಾಸೀನಾಧಿಕಾರಿಗಳು (ಆಡಳಿತ) ಇವರಿಗೆ ತಮ್ಮ ನ್ಯಾಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು.
4. ಕರ್ನಾಟಕ ರಾಜ್ಯ ಗೆಜೆಟ್ ಪ್ರಕಟಣೆಗಾಗಿಃ ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯ ಪತ್ರ ಸರ್ಕಾರಿ ಹೊರವಲಯ ಮತ್ತು ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು –560059.
5. ಉದ್ಯೋಗಾಧಿಕಾರಿಗಳು, ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ಚಾಮರಾಜನಗರ.
6. ನಿರ್ದೇಶಕರು, ವಾರ್ತಾ ಮತ್ತು ಪ್ರವಾಸೋದ್ಯಮ ಇಲಾಖೆ, ಬೆಂಗಳೂರು – ಇವರಿಗೆ ರಾಜ್ಯಾದ್ಯಂತ ವ್ಯಾಪಕ ಪ್ರಚಾರದಲ್ಲಿರುವ ಎರಡು ದಿನ ಪತ್ರಿಕೆಗಳಲ್ಲಿ ಪ್ರಕಟಿಸುವಂತೆ ಕೋರಿ.
7. ಈ ನ್ಯಾಯಾಲಯದ ಸೂಚನಾ ಫಲಕಕ್ಕೆ.